# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಆರ್.ರಾಮಯ್ಯ, ಹಿಂದಿನ ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ, ಸೋಲೂರು ಗ್ರಾಮ ಪಂಚಾಯಿತಿ, ಪ್ರಸ್ತುತ ಕಾರ್ಯದರ್ಶಿ, ತಿಪ್ಪಸಂದ್ರ ಗ್ರಾಮ ಪಂಚಾಯಿತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ ಇವರ ವಿರುದ್ಧದ ಲೋಕಾಯುಕ್ತ ವಿಚಾರಣೆ- ದಂಡನೆ ವಿಧಿಸುವ ಬಗ್ಗೆ ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 139 ಗ್ರಾಪಂಕಾ 2009, ದಿನಾಂಕ: 27-02-2009.
2. ಅಪರ ನಿಬಂಧಕರು ವಿಚಾರಣೆಗಳು ಇವರ ವರದಿ ಸಂಖ್ಯೆ: Lok/ARE-3/ENQ18/ 2009-10, ದಿನಾಂಕ: 31-05-2011.
3. ಮಾನ್ಯ ಉಪಲೋಕಾಯುಕ್ತರ ಪತ್ರಾಂಕಿತ ಸಹಾಯಕರು, ಕರ್ನಾಟಕ ಲೋಕಾಯುಕ್ತ ಇವರ ಪತ್ರ ಸಂಖ್ಯೆ: Lok/ARE-3/ENQ18/2009-10, ದಿನಾಂಕ: 18-06-2011.
4. ಸರ್ಕಾರದ 2ನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 199 ಗ್ರಾಪಂಕಾ 2011, ದಿನಾಂಕ: 14-07-2011.
5. ಶ್ರೀ ಆರ್ ರಾಮಯ್ಯ ಇವರ ಲಿಖಿತ ಹೇಳಿಕೆ ದಿನಾಂಕ:01-08-2011.
6. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 199 ಗ್ರಾಪಂಕಾ 2011, ದಿನಾಂಕ: 15-10-2011.
7. ಕರ್ನಾಟಕ ಆಡಳಿತ ನ್ಯಾಯಮಂಡಳಿಯ ದಿನಾಂಕ:08-01-2016 ರ ಆದೇಶ.
8. ಸಿಆಸುಇ ಸುತ್ತೋಲೆ ಕ್ರಮ ಸಂಖ್ಯೆ: ಸಿಆಸುಇ 18 ಇಸೇಬಿ 2001, ದಿನಾಂಕ 14.09.2001

**ಪ್ರಸ್ತಾವನೆ :**

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ ಶ್ರೀ ಆರ್.ರಾಮಯ್ಯ, ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ, ತಿಪ್ಪಸಂದ್ರ ಗ್ರಾಮ ಪಂಚಾಯಿತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ ಇವರು ಈ ಹಿಂದೆ ಸೋಲೂರು ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಇವರ ವಿರುದ್ಧ ಶ್ರೀ ಸೈಯ್ಯದ್ ನದೀಮ್ ಎಂಬುವವರು ತಮ್ಮ ಜಮೀನಿಗೆ ವಿದ್ಯುತ್ ಸಂಪರ್ಕಕ್ಕಾಗಿ ಜನರಲ್ ಲೈಸೆನ್ಸ್ ನೀಡಲು ಕೋರಿ ಸಲ್ಲಿಸಿದ್ದ ಅರ್ಜಿಯ ವಿಷಯವನ್ನು ದಿನಾಂಕ: 09-07-2008 ರಂದು ನಡೆದ ಗ್ರಾಮ ಪಂಚಾಯಿತಿ ಸಭೆಯ ಅಜೆಂಡಾದಲ್ಲಿ ಖಾತಾ ಬದಲಾವಣೆ ಮಾಡುವ ವಿಷಯವೆಂದು ಮಂಡಿಸಿ ಕರ್ತವ್ಯ ಲೋಪ ಎಸಗಿರುವ ಆರೋಪದ ಮೇಲೆ ಅವರ ವಿರುದ್ಧ ಮೇಲೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)ನಿಯಮಾವಳಿಗಳು, 1957ರ ನಿಯಮ 14ಎ ರನ್ವಯ ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ (2) ರಲ್ಲಿ ಮೇಲೆ ವಿವರಿಸಿದ ಪ್ರಕರಣದ ಸಂಬಂಧ ಅಪರ ನಿಬಂಧಕರು, ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ ಇವರು ಶ್ರೀ ಆರ್.ರಾಮಯ್ಯ, ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ, ತಿಪ್ಪಸಂದ್ರ ಗ್ರಾಮ ಪಂಚಾಯಿತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು, 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿ ಸದರಿ ನೌಕರರ ವಿರುದ್ಧದ ಆರೋಪವು ಸಾಬೀತಾಗಿರುತ್ತದೆ ಎಂದು ವರದಿ ನೀಡಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ ಅಪರ ನಿಬಂಧಕರು, ಕರ್ನಾಟಕ ಲೋಕಾಯುಕ್ತ ಇವರ ವರದಿಯ ಆಧಾರದ ಮೇಲೆ ಮಾನ್ಯ ಉಪಲೋಕಾಯುಕ್ತರು ಸದರಿ ನೌಕರರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು, 1957 ರ ನಿಯಮ 8(vi) ರ ಅನುಸಾರ ಅವರನ್ನು ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಿಸುವ ದಂಡನೆ ವಿಧಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (4) ರಲ್ಲಿ ಎರಡನೇ ಕಾರಣ ಕೇಳುವ ನೋಟೀಸ್ ಜಾರಿಗೊಳಿಸಿ ಸದರಿ ನೌಕರರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿತ್ತು.

ಮೇಲೆ ಓದಲಾದ (5) ರಲ್ಲಿ ಸದರಿ ನೌಕರರು ಸಲ್ಲಿಸಿರುವ ಲಿಖಿತ ಹೇಳಿಕೆ, ವಿಚಾರಣಾ ವರದಿ, ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸುಗಳನ್ನು ಕೂಲಂಕಷವಾಗಿ ಪರಿಶೀಲಿಸಿದ್ದು, ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸಿನಂತೆ, ಶ್ರೀ ಆರ್.ರಾಮಯ್ಯ, ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ, ತಿಪ್ಪಸಂದ್ರ ಗ್ರಾಮ ಪಂಚಾಯಿತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ ಇವರನ್ನು ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಿಸಿ ಮೇಲೆ ಓದಲಾದ (6) ರಲ್ಲಿ ಆದೇಶಿಸಲಾಗಿತ್ತು.

ಸದರಿ ನೌಕರರನ್ನು ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಿಸಿ ಸರ್ಕಾರವು ಹೊರಡಿಸಿದ ಆದೇಶವನ್ನು ಪ್ರಶ್ನಿಸಿ, ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯ, ಬೆಂಗಳೂರು ಇಲ್ಲಿ ದಾಖಲಿಸಿದ ಅರ್ಜಿ ಸಂಖ್ಯೆ: 7058/2011 ರಲ್ಲಿ ವಿಚಾರಣಾ ನಂತರ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ದಿನಾಂಕ:08-01-2016 ರಂದು ಈ ಕೆಳಕಂಡಂತೆ ಆದೇಶಿಸಿರುತ್ತದೆ.

"In the circumstances of the case, while in view of the discussions in the previous para, we do not find any procedural error. In the proceedings, we do feel that the penalty of compulsory retirement in the circumstances of the case is too harsh and has been imposed without independent application of mind.

In view of above, the application is allowed in part. The impugned order dated:15-10-2011 passed by the 1st respondent to pass a fresh order in the light of the observations made above within three months from the date of receipt of copy of this order."

ಸರ್ಕಾರವು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಮೇಲೆ ನೀಡಿರುವ ಆದೇಶದನ್ವಯ ಮರುಪರಿಶೀಲಿಸಿ, ಸದರಿ ನೌಕರರು ಎಸಗಿರುವ ಕರ್ತವ್ಯ ಲೋಪವು ಕಾರ್ಯವಿಧಾನದ ಲೋಪವಾಗಿರುವುದನ್ನು ಪರಿಗಣಿಸಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ 18 ಸೇಇವಿ 2001, ಬೆಂಗಳೂರು, ದಿನಾಂಕ 14ನೇ ಸೆಪ್ಟೆಂಬರ್ 2001 ರಲ್ಲಿ ಕ್ರಮ ಸಂಖ್ಯೆ 6 ರಲ್ಲಿ ತಿಳಿಸಿರುವಂತೆ ಶ್ರೀ ಆರ್.ರಾಮಯ್ಯ, ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ, ತಿಪ್ಪಸಂದ್ರ ಗ್ರಾಮ ಪಂಚಾಯಿತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 8(v)ರ ಅನ್ವಯ ವಾಗ್ದಂಡನೆ ಹಾಗೂ ಒಂದು ಕಾಲವೇತನ ಶ್ರೇಣಿ ಕೆಳಹಂತಕ್ಕೆ ಇಳಿಸುವ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಣಯಿಸಿದೆ.

ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 08 ಗ್ರಾಪಂನ್ಯಾ 2017, ಬೆಂಗಳೂರು, ದಿನಾಂಕ: 06.05.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನನ್ವಯ ಶ್ರೀ ಆರ್.ರಾಮಯ್ಯ, ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ, ತಿಪ್ಪಸಂದ್ರ ಗ್ರಾಮ ಪಂಚಾಯಿತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ ಇವರನ್ನು ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಿಸಿ ಹೊರಡಿಸಲಾದ ಆದೇಶವನ್ನು ಪುನರ್‌ಪರಿಶೀಲಿಸಿ, ಕರ್ನಾಟಕ ಆಡಳಿತ ನ್ಯಾಯಮಂಡಳಿಯ ಆದೇಶದಂತೆ, ಶ್ರೀ ಆರ್.ರಾಮಯ್ಯ, ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ, ತಿಪ್ಪಸಂದ್ರ ಗ್ರಾಮ ಪಂಚಾಯಿತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 8(v)ರ ಅನ್ವಯ ವಾಗ್ದಂಡನೆ ಹಾಗೂ ಒಂದು ಕಾಲವೇತನ ಶ್ರೇಣಿ ಕೆಳಹಂತಕ್ಕೆ ಇಳಿಸುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

***(ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್)***
***ರವರಿಂದ ಅನುಮೋದಿತ)***

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ರಾಮನಗರ ಜಿಲ್ಲಾ ಪಂಚಾಯತಿ, ರಾಮನಗರ ಜಿಲ್ಲೆ.
6) ಕಾರ್ಯನಿರ್ವಾಹಕ ಅಧಿಕಾರಿಗಳು, ಮಾಗಡಿ ತಾಲ್ಲೂಕು ಪಂಚಾಯಿತಿ, ಮಾಗಡಿ, ರಾಮನಗರ ಜಿಲ್ಲೆ.
7) ಶ್ರೀ ಆರ್.ರಾಮಯ್ಯ, ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ, ತಿಪ್ಪಸಂದ್ರ ಗ್ರಾಮ ಪಂಚಾಯಿತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ. (ಮಾಗಡಿ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
8) ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9) ಹೆಚ್ಚುವರಿ ಪ್ರತಿ/ ಶಾಖಾ ರಕ್ಷಕ ಕಡತ.